**<u>4ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಬೆಂಗಳೂರು</u>**

**ಸಿಸಿ ನಂ. 20544/2017 ಚಾಸಾಃ 13 ಪ್ರಾಸಾಃ 9**

| | | |
|---|---|---|
| ಸಾಕ್ಷಿದಾರರ ಹೆಸರು | : | ಸತೀಶ್ |
| ತಂದೆಯ ಹೆಸರು | : | ನಾಗರಾಜ್ ಶಾಸ್ತ್ರಿ |
| ವಯಸ್ಸು | : | 48 ವರ್ಷ |
| ವೃತ್ತಿ | : | ಸಹಾಯಕ ಅರ್ಚಕರು |
| ವಾಸ | : | ಬನಶಂಕರಿ, ಬೆಂಗಳೂರು |

**<u>ಸಾಕ್ಷಿಯನ್ನು ದಿಃ 25.11.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯವಿಚಾರಣೆ: ಪ್ರಾಙ್ಞಾ ಹಿ.ಸಾ.ಸ.ಅ ರವರಿಂದಃ-</u>**

ಆರೋಪಿಗಳು ಬನಶಂಕರಿ ದೇವಸ್ಥಾನದಲ್ಲಿ ಅರ್ಚಕರಾಗಿ ಕೆಲಸ ಮಾಡುತ್ತಿದ್ದರು. ನಾನು ಸದರಿ ದೇವಸ್ಥಾನದಲ್ಲಿ ಸಹಾಯಕ ಅರ್ಚಕನಾಗಿ ಕೆಲಸ ಮಾಡುತ್ತಿದ್ದೆನು. ಬನಶಂಕರಿ ದೇವಸ್ಥಾನದ ದೇವಿಯ ಕಿರೀಟ ಮತ್ತು ಪಾದುಕೆಯಲ್ಲಿ ಭಿನ್ನವಾಗಿದ್ದು ತಿಳಿದು ಬಂದಿರುತ್ತದೆ. 06 ಗ್ರಾಂ 800 ಮಿಲಿ ಚಿನ್ನ ಕಿರೀಟ ಮತ್ತು ಪಾದುಕೆಯಲ್ಲಿ ಕಳುವಾಗಿದೆ ಎಂದು ತಿಳಿದುಕೊಂಡಿರುತ್ತೇನೆ. ಉಳಿದ ವಿಚಾರ ನನಗೆ ಗೊತ್ತಿಲ್ಲ. ಯಾರು ಸದರಿ ಆಭರಣಗಳನ್ನು ಕಳವು ಮಾಡಿರುತ್ತಾರೆ ಎಂದು ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**ಸೂಚನೆಃ ಈ ಹಂತದಲ್ಲಿ ಪ್ರಾಙ್ಞಾ ಹಿ.ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಬೇಕೆಂದು ನ್ಯಾಯಾಲಯಕ್ಕೆ ಮನವಿಯನ್ನು ಕೋರಿರುತ್ತಾರೆ. ಅದರಂತೆ ಅನುಮತಿಯನ್ನು ನೀಡಲಾಯಿತು.**

**<u>ಪಾಟೀ ಸವಾಲುಃ ಪ್ರಾಙ್ಞಾ ಹಿ.ಸ.ಸ.ಅ. ರವರಿಂದಃ</u>**

2ನೇ ಆರೋಪಿ ನಾಗರಾಜ ರವರು ದೇವಸ್ಥಾನದಲ್ಲಿ ಸರಿಯಾಗಿ ಕೆಲಸ ಮಾಡುತ್ತಿರಲಿಲ್ಲವೆಂದು ಆರೋಪ ಇತ್ತು ಎಂದರೆ ನನಗೆ ಗೊತ್ತಿಲ್ಲ. 2ನೇ ಆರೋಪಿಯು ಪತ್ರಕರ್ತ ಎಂದು ತಿಳಿಸಿ ಜನರಿಗೆ ಮೋಸ ಮಾಡುತ್ತಿದ್ದರು ಎಂದರೆ

ನನಗೆ ಗೊತ್ತಿಲ್ಲ. ಭಕ್ತಾದಿಗಳಿಂದ ಹಣವನ್ನು ಸಂಗ್ರಹಿಸಿ ಆರೋಪಿಗಳು ಅದನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ದಿಃ09.06.2015 ರಂದು 2ನೇ ಆರೋಪಿ ನಾಗರಾಜ್ ರವರು ದೇವಿಯ ಆಭರಣಗಳನ್ನು ಅಲಂಕಾರ ಮಾಡಿದ್ದರು ಎಂದು ನನಗೆ ಗೊತ್ತಿಲ್ಲ. 2ನೇ ಆರೋಪಿಯು ಕಿರೀಟ ಮತ್ತು ಪಾದುಕೆಯ ಚಿನ್ನವನ್ನು ಕತ್ತರಿಸಿ ಕಳವು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗಳ ನಡುವೆ ತಟ್ಟೆ ಕಾಸಿನ ವಿಚಾರದಲ್ಲಿ ವೈಶಮ್ಯ ಇತ್ತು ಎಂದರೆ ನನಗೆ ಗೊತ್ತಿಲ್ಲ. ಆರೋಪಿಗಳು ಆಭರಣ ಮತ್ತು ದೇವಸ್ಥಾನದ ಹಣವನ್ನು ದುರ್ಬಳಕೆ ಮಾಡಿಕೊಂಡಿರುವುದಾಗಿ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-29 ಎಂದು ಗುರ್ತಿಸಲಾಯಿತು. ನನಗೆ ಈ ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರು ನಾನು ಆರೋಪಿಗಳು ನನ್ನ ಸಹೋದ್ಯೋಗಿಗಳಾಗಿರುವುದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ಮತ್ತು 2ನೇ ಆರೋಪಿತರ ಪರ ವಕೀಲರಿಂದಃ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲವೆಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯ್ತು)

**ಓ.ಹೇ.ಕೇ.ಸ.ಇದೆ**

**4ನೇ ಎ.ಸಿ.ಜೆ.ಎಂ.ನ್ಯಾ.,**